**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ರಾಜ್ಯದ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳಿಗೆ ಡಿಪ್ಲೋಮಾ ಪ್ರವೇಶ ಪ್ರಕ್ರಿಯೆಯನ್ನು ಆನ್‌ಲೈನ್ ಇಂಟರಾಕ್ಟೀವ್ ಕೌನ್ಸಿಲಿಂಗ್ (Online Interactive Counseling) ಮೂಲಕ ನಡೆಸುವ ಬಗ್ಗೆ-

*******

**ಓ ದ ಲಾ ಗಿ ದೆ:-**

1. ಸರ್ಕಾರದ ಆದೇಶ ಸಂಖ್ಯೆ: ಇಡಿ 66 ಟಿಪಿಇ 2012, ದಿನಾಂಕ:05/05/2012.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 107 ಟಿಪಿಇ 2015, ದಿನಾಂಕ:25/04/2015.
3. ಸರ್ಕಾರದ ಆದೇಶ ಸಂಖ್ಯೆ: ಇಡಿ 059 ಟಿಪಿಇ 2016, ದಿನಾಂಕ:25/04/2016.
4. ಮಾನ್ಯ ವಿಧಾನ ಸಭಾ ಸದಸ್ಯರಾದ ಡಾ॥ರಫೀಕ್ ಅಹ್ಮದ್ ಎಸ್ ರವರು ರವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ ವಿಷಯಕ್ಕೆ ಮಾನ್ಯ ಉನ್ನತ ಶಿಕ್ಷಣ ಮಂತ್ರಿಯವರ ಉತ್ತರ
5. ತಾಂತ್ರಿಕ ಶಿಕ್ಷಣ ನಿರ್ದೇಶಕರ ಪತ್ರ ಸಂಖ್ಯೆ:ಡಿಟಿಇ/427/ಎಸಿಎಂ(2)/2016-17, ದಿ:29-12-2016.

**ಪ್ರ ಸ್ತಾ ವ ನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರಿ ಆದೇಶದಲ್ಲಿ ಪ್ರಥಮವಾಗಿ 2012-13ನೇ ಸಾಲಿನಿಂದ ಜಾರಿಗೆ ಬರುವಂತೆ ರಾಜ್ಯದ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳಿಗೆ ವಿದ್ಯಾರ್ಥಿಗಳ ಪ್ರವೇಶಾತಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ನಡೆಸುವ ಕೌನ್ಸಿಲಿಂಗ್ ಮೂಲಕ ಅರ್ಹ ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರಿ ಆದೇಶದಲ್ಲಿ 2015-16ನೇ ಶೈಕ್ಷಣಿಕ ಸಾಲಿನಿಂದ ರಾಜ್ಯದ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿನ ಪ್ರಥಮ ವರ್ಷದ ಡಿಪ್ಲೋಮಾ ಕೋರ್ಸಿನ ಪ್ರವೇಶಾತಿಯನ್ನು ಆನ್‌ಲೈನ್ ನಾನ್ ಇಂಟರ್-ಆಕ್ಟೀವ್ ಕೌನ್ಸಿಲಿಂಗ್ ಮೂಲಕ National Information Centre, Bangalore ಇವರು ಅಭಿವೃದ್ಧಿಪಡಿಸಿರುವ ತಂತ್ರಾಂಶವನ್ನು ಬಳಸಿಕೊಂಡು, ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ನಡೆಸಲು ಅನುಮತಿ ನೀಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಸರ್ಕಾರಿ ಆದೇಶದಲ್ಲಿ 2016-17ನೇ ಶೈಕ್ಷಣಿಕ ಸಾಲಿಗೂ ಸಹ ರಾಜ್ಯದ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಪ್ರಥಮ ಡಿಪ್ಲೋಮಾ ಪ್ರವೇಶಾತಿಯನ್ನು ಆನ್‌ಲೈನ್ ನಾನ್-ಇಂಟರಾಕ್ಟೀವ್-ಕೌನ್ಸಿಲಿಂಗ್ (ಆಲ್‌ಲೈನ್ ಆಪ್ಷನ್ ಎಂಟ್ರಿ) ಮೂಲಕ ಪ್ರವೇಶಾತಿ ಪ್ರಕ್ರಿಯೆಯನ್ನು ನಡೆಸಲು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿ ಮಾನ್ಯ ವಿಧಾನಸಭಾ ಸದಸ್ಯರಾದ ಡಾ॥ರಫೀಕ್ ಅಹ್ಮದ್ ಎಸ್ ಇವರು, ರಾಜ್ಯದ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳಿಗೆ ಆನ್‌ಲೈನ್ ನಾನ್-ಇಂಟರಾಕ್ಟೀವ್ ಕೌನ್ಸಿಲಿಂಗ್‌ನಿಂದ ನಡೆಸಲಾಗುವ ಪ್ರವೇಶ ಪ್ರಕ್ರಿಯೆಯಿಂದ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಬಹಳ ತೊಂದರೆಯಾಗುತ್ತಿದ್ದು, ಇದನ್ನು ಆನ್‌ಲೈನ್ ಇಂಟರಾಕ್ಟೀವ್ ಕೌನ್ಸಿಲಿಂಗ್ ಮೂಲಕ ನಡೆಸಿದಲ್ಲಿ ಯಾವುದೇ ತೊಂದರೆಯಾಗುವುದಿಲ್ಲವೆಂದು ತಿಳಿಸಿರುತ್ತಾರೆ. ಈ ಬಗ್ಗೆ ಉನ್ನತ ಶಿಕ್ಷಣ ಸಚಿವರು ಸದನಕ್ಕೆ ನೀಡಿದ ಲಿಖಿತ ಉತ್ತರದಲ್ಲಿ, 2017-18ನೇ ಸಾಲಿನಿಂದ ರಾಜ್ಯದಲ್ಲಿನ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳ ಪ್ರಥಮ ವರ್ಷದ ಡಿಪ್ಲೋಮಾ ಪ್ರವೇಶಾತಿ ಪ್ರಕ್ರಿಯೆಯನ್ನು ಆನ್‌ಲೈನ್ ನಾನ್-ಇಂಟರಾಕ್ಟೀವ್ ಕೌನ್ಸಿಲಿಂಗ್ ಬದಲಾಗಿ "ಆನ್‌ಲೈನ್ ಇಂಟರಾಕ್ಟೀವ್ ಪ್ರವೇಶಾತಿ" ನಡೆಸಲು ಸರ್ಕಾರವು ಸೂಕ್ತ ಕ್ರಮವಹಿಸುವುದು ಎಂದು ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ತಾಂತ್ರಿಕ ಶಿಕ್ಷಣ ನಿರ್ದೇಶಕರ ಪತ್ರದಲ್ಲಿ ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳು 2017-18ನೇ ಸಾಲಿನಿಂದ ರಾಜ್ಯದಲ್ಲಿನ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳ ಪ್ರಥಮ ವರ್ಷದ ಡಿಪ್ಲೋಮಾ ಪ್ರವೇಶಾತಿ ಪ್ರಕ್ರಿಯೆಯನ್ನು "ಆನ್‌ಲೈನ್ ನಾನ್-ಇಂಟರಾಕ್ಟೀವ್" ಕೌನ್ಸಿಲಿಂಗ್ ಬದಲಾಗಿ "ಆನ್‌ಲೈನ್ ಇಂಟರಾಕ್ಟೀವ್" ಪ್ರವೇಶಾತಿ ಕುರಿತು ಸರ್ಕಾರವು ಸೂಕ್ತ ಕ್ರಮಕೈಗೊಳ್ಳಲಾಗುವುದೆಂದು ಸದನಕ್ಕೆ ಉತ್ತರಿಸಿರುವುದರಿಂದ, ಅದರಂತೆ ಕ್ರಮವಹಿಸಲು ನಿರ್ದೇಶನ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 207 ಟಿಜಿಎಲ್ 2016,**
**ಬೆಂಗಳೂರು ದಿನಾಂಕ:20ನೇ ಮಾರ್ಚ್ 2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ, ರಾಜ್ಯದಲ್ಲಿನ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳಿಗೆ ಪ್ರಥಮ ವರ್ಷದ ಡಿಪ್ಲೋಮಾ ಕೋರ್ಸಿಗೆ 2017-18ನೇ ಸಾಲಿನಿಂದ ಜಾರಿಗೆ ಬರುವಂತೆ ವಿದ್ಯಾರ್ಥಿಗಳ ಪ್ರವೇಶಾತಿಯನ್ನು "ಆನ್‌ಲೈನ್ ನಾನ್-ಇಂಟರಾಕ್ಟೀವ್" ಕೌನ್ಸಿಲಿಂಗ್ ಬದಲಾಗಿ "ಆನ್‌ಲೈನ್ ಇಂಟರಾಕ್ಟೀವ್" ಕೌನ್ಸಿಲಿಂಗ್ ಮೂಲಕ ನಡೆಸಲು ಸರ್ಕಾರವು ಅನುಮತಿ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).

ಗೆ,

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು – 560 001.
2. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು – 560 001.
3. ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು
4. ಸಂಬಂಧಪಟ್ಟ ಎಲ್ಲಾ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ (ತಾಂತ್ರಿಕ ಶಿಕ್ಷಣ ನಿರ್ದೇಶಕರ ಮುಖಾಂತರ).
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ರವರ ಆಪ್ತ ಕಾರ್ಯದರ್ಶಿರವರಿಗೆ.
6. ಮಾಹಿತಿ ಕೇಂದ್ರ / ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ / ಒಡಿಜಿಸಿ

ಸಂಖ್ಯೆ: ಡಿಟಿಇ/427/ಎಸಿಎಂ(2)/2016-17 ದಿನಾಂಕ:24-03-2017

-:: ಹಿಂಬರಹ ::-

ಸರ್ಕಾರ ಅದೇಶ ಸಂ. ಇಡಿ 207 ಟಿಜಿಎಲ್ 2016, ದಿ:20-03-2017ರ ಪತ್ರವನ್ನು ರಾಜ್ಯದ ಸರ್ಕಾರಿ, ಅನುದಾನಿತ, ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ ಸೂಕ್ತ ಮಾಹಿತಿಗಾಗಿ ಕಳುಹಿಸಿದೆ.

ನಿರ್ದೇಶಕರು

ಪ್ರತಿ ಮಾಹಿತಿಗಾಗಿ:-

*ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ, ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ*